# ಕರ್ನಾಟಕ ಸರಕಾರದ ನಡುವಳಿಕೆಗಳು

ವಿಷಯ:- ಬಾಗಲಕೋಟ ಜಿಲ್ಲೆಯ ಬೀಳಗಿ ತಾಲೂಕಿನ: ಯಡಹಳ್ಳಿ (ಜಿ) ಗ್ರಾಮದ ಹೆಚ್ಚುವರಿ ಪುನರ್‌ವಸತಿ ಕೇಂದ್ರದ ನಿರ್ಮಾಣಕ್ಕಾಗಿ ಮುಧೋಳ ತಾಲೂಕ: ಮುಧೋಳ ಗ್ರಾಮದ ಜಮೀನು ಭೂಸ್ವಾಧೀನತೆಯ ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಅಧಿನಿಯಮ-2013ರನ್ವಯ ಕರಡು ಯಾದಿಯನ್ನು ಅನುಮೋದಿಸುವ ಕುರಿತು.

ಓದಲಾಗಿದೆ: 1} ಭೂಸ್ವಾಧೀನ ಕಾಯ್ದೆ 2013ರ ಕಲಂ 11(1) ಕ್ಕೆ ಅನುಸಾರವಾಗಿ ಹೊರಡಿಸಲಾಗಿರುವ ಅಧಿಸೂಚನೆ ಸಂಖ್ಯೆ:ವಿಜಿಬಾ/ಭೂಸ್ವಾ/ಸಿಆರ್-29/ 2014-15 ದಿನಾಂಕ: 28-02-2015.

2} ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಚಿತ ಪರಿಹಾರಕ್ಕೆ ಹಕ್ಕು, ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಅಧಿನಿಯಮ, 2013ರ ಕಲಂ 16(6)ರ ಕುರಿತು.

3} ಪುನರ್‌ವಸತಿ ಅಧಿಕಾರಿಗಳು, ಕೃ.ಮೇ.ಯೋ. ಬೀಳಗಿ. ಇವರ ಪತ್ರ ಸಂಖ್ಯೆ: 157 ದಿನಾಂಕ: 23-06-2016.

4} ಮಹಾ ವ್ಯವಸ್ಥಾಪಕರು, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ, ಕೃ.ಮೇ.ಯೋ. ನವನಗರ, ಬಾಗಲಕೋಟ ಇವರ ಕಲಂ 17(2)ರಡಿ ಶಿಫಾರಸ್ಸು ದಿನಾಂಕ:29 -06-2016.

*******

ಆದೇಶ ಸಂ:ಮವ್ಯ/ಪುಪು/ಆರ್‌ಆರ್‌ಎಪಿ/ಬೀಳಗಿ/ಸಿಆರ್-11 /2016-17 /125 ದಿನಾಂಕ:30-06-2016.

ಪುನರ್‌ವಸತಿ ಅಧಿಕಾರಿಗಳು, ಕೃ.ಮೇ.ಯೋ. ಬೀಳಗಿ ಇವರಿಂದ ಬಂದಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಸಾರ್ವಜನಿಕ ಉದ್ದೇಶಕ್ಕಾಗಿ ಬಾಗಲಕೋಟ ಜಿಲ್ಲೆಯ ಬೀಳಗಿ ತಾಲೂಕಿನ: ಯಡಹಳ್ಳಿ (ಜಿ) ಗ್ರಾಮದ ಹೆಚ್ಚುವರಿ ಪುನರ್‌ವಸತಿ ಕೇಂದ್ರದ ನಿರ್ಮಾಣಕ್ಕಾಗಿ ಮುಧೋಳ ತಾಲೂಕ: ಮುಧೋಳ ಗ್ರಾಮದ ಜಮೀನು ಭೂಸ್ವಾಧೀನಪಡಿಸಿಕೊಳ್ಳುತ್ತಿರುವ ಜಮೀನಿನ ಭೂಮಾಲೀಕರಿಗೆ ಒಟ್ಟು: 09ಎ-22ಗುಂ ಕ್ಷೇತ್ರಕ್ಕೆ ನೂತನ ಕಾಯ್ದೆ ಕಲಂ 16(2) ನೇದ್ದರ ಮೇರೆಗೆ ಗಣತಿ ಕಾರ್ಯವನ್ನು ಕೈಗೊಂಡು ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಯೋಜನೆಯ ಯಾದಿಯನ್ನು ತಯಾರಿಸಿದ್ದಾರೆ.

ವಿಶೇಷ ಭೂಸ್ವಾಧೀನಾಧಿಕಾರಿಗಳು, ಕೃ.ಮೇ.ಯೋ. ಬೀಳಗಿ ಇವರನ್ನು ಈ ಯೋಜನೆಗೆ ಕಾರ್ಯವನ್ನು ನಿರ್ವಹಿಸಲು ನೇಮಿಸಲಾಗಿದೆ ಮತ್ತು ಸ್ವತ್ತುಗಳನ್ನು ಭೂಸ್ವಾಧೀನಪಡಿಸಿಕೊಳ್ಳಲು ಆದೇಶಿಸುವ ಅಧಿಕಾರವನ್ನು ನೀಡಲಾಗಿದೆ.

ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನ್ಯಾಯೋಚಿತ ಪರಿಹಾರಕ್ಕೆ ಹಕ್ಕು, ಪುನರ್‌ವಸತಿ ಮತ್ತು ಪುನರ್ ವ್ಯವಸ್ಥೆ ಅಧಿನಿಯಮ, 2013ರ ಕಲಂ 16(6)ರ ಅನುಗುಣವಾಗಿ ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು ಹಾಗೂ ಭೂಸ್ವಾಧೀನ ಕಾಯ್ದೆ 2013ರ ಕಲಂ 45 ರಡಿ ಪ್ರಕರಣದಲ್ಲಿ ಸದರಿ ಭೂಸ್ವಾಧೀನ ಪ್ರಕರಣದಲ್ಲಿ ಒಳಗೊಂಡ ಕ್ಷೇತ್ರವು 100 ಎಕರೆಗಿಂತ ಕಡಿಮೆ ಇರುವುದರಿಂದ ಅನ್ವಯಿಸುವುದಿಲ್ಲ.

ನೂತನ ಭೂಸ್ವಾಧೀನ ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆ ಕಾಯ್ದೆ 2013ರ ಕಲಂ 16(3)ರಡಿ ತಯಾರಿಸಲಾದ ಗಣತಿ ಯಾದಿಯಲ್ಲಿ ಒಟ್ಟು ಕ್ಷೇತ್ರ: 09-22 ಎ.ಗುಂ. ಕ್ಷೇತ್ರದಲ್ಲಿ ಮುಧೋಳ ಗ್ರಾಮಕ್ಕೆ ಸಂಬಂಧಿಸಿದಂತೆ ಒಟ್ಟು: 01 ಕುಟುಂಬವು ಭೂಮಿಯನ್ನು ಕಳೆದುಕೊಳ್ಳುತ್ತಿದ್ದು, ಅದರಲ್ಲಿ 01 ಕುಟುಂಬವು ಅವರು ಹೊಂದಿದ ಕ್ಷೇತ್ರಕ್ಕಿಂತ ಬಹುಪಾಲು ಭೂಮಿಯನ್ನು ಕಳೆದುಕೊಳ್ಳುತ್ತಿದ್ದು, ಅವರ ಜೀವನಾಧಾರ ನಷ್ಟತೆಯನ್ನು ಕಳೆದುಕೊಳ್ಳವುದರಿಂದ ಅನುಸೂಚಿ-31 2ನೇ ವಿವರ ಪಟ್ಟಿ ಅನುಸಾರ ಜೀವನಾಧಾರ ಸೌಲಭ್ಯವನ್ನು ನೀಡಲು ಪುನರ್‌ವಸತಿ ಮತ್ತು ಪುನರ್‌ನಿರ್ಮಾಣದ ಕ್ರೀಯಾ ಯೋಜನೆಯನ್ನು ತಯಾರಿಸಿರುತ್ತಾರೆ. ಇನ್ನುಳಿದ ಯಾವುದೇ ಕುಟುಂಬವು ಜೀವನೋಪಾಯಕ್ಕೆ ನಷ್ಟ ಹೊಂದುವುದಿಲ್ಲ ಎಂಬುದನ್ನು ಪುನರ್‌ವಸತಿ ಅಧಿಕಾರಿಗಳು, ಕೃ.ಮೇ.ಯೋ. ಬೀಳಗಿ ರವರು ಕೂಲಂಕುಷವಾಗಿ ಪರಿಶೀಲಿಸಿ ನೂತನ ಕಾಯ್ದೆರಡಿ ಕಲಂ 16(6)ರಡಿ ಪುನರ್‌ವಸತಿ ಮತ್ತು ಪುನರ್‌ವ್ಯವಸ್ಥೆಯ ಕರಡು ಯಾದಿಯನ್ನು ತಯಾರಿಸಿ ದೃಢಪಡಿಸಿಕೊಂಡಿದ್ದಾರೆ.

ಪುನರ್‌ವಸತಿ ಅಧಿಕಾರಿಗಳು, ಕೃ.ಮೇ.ಯೋ. ಬೀಳಗಿ ಇವರು ಶಿಫಾರಸ್ಸು ಮಾಡಿರುವ ಯಾದಿಯನ್ನು ಆಧರಿಸಿ, ನೂತನ ಭೂಸ್ವಾಧೀನ ಕಾಯ್ದೆ 2013ರ ಕಲಂ 84 ರನ್ವಯ ಸೌಲಭ್ಯ ಪಡೆಯುವ ಕುಟುಂಬವು ಸುಳ್ಳು ಮಾಹಿತಿ ನೀಡಿದಲ್ಲಿ ಕಲಂ 84 (1) (2) ಹಾಗೂ (3) ರನ್ವಯ ಶಿಕ್ಷೆಗೆ ಗುರಿಪಡಿಸಲಾಗುವುದೆಂಬ ಷರತ್ತಿಗೆ ಒಳಪಟ್ಟು ಪುನರ್‌ವ್ಯವಸ್ಥೆ ಯೋಜನೆಯ ಪ್ರಸ್ತಾವನೆಯನ್ನು ನೂತನ ಕಾಯ್ದೆ ಕಲಂ 18ರಡಿ ಅನುಮೋದಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

ಆಯುಕ್ತರು,
ಪುಪು ಮತ್ತು ಭೂಸ್ವಾಧೀನ, ಕೃಮೇಯೋ,
ಹಾಗೂ ಪದನಿಮಿತ್ತ ಸರಕಾರದ ಕಾರ್ಯದರ್ಶಿಗಳು,
ಕರ್ನಾಟಕ ಸರಕಾರ, ಕಂದಾಯ ಇಲಾಖೆ,
ನವನಗರ, ಬಾಗಲಕೋಟ.

ಇವರಿಗೆ:

1) ಜಿಲ್ಲಾಧಿಕಾರಿಗಳು ಬಾಗಲಕೋಟ ಜಿಲ್ಲೆ ಇವರಿಗೆ ಮಾಹಿತಿ ಕುರಿತು ಕಳುಹಿಸಿದೆ.
2) ಮಹಾ ವ್ಯವಸ್ಥಾಪಕರು, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ, ಕೃ.ಮೇ.ಯೋ., ನವನಗರ, ಬಾಗಲಕೋಟ ಇವರಿಗೆ
3) ವಿಶೇಷ ಜಿಲ್ಲಾಧಿಕಾರಿಗಳು, ಕೃ.ಮೇ.ಯೋ. ನವನಗರ, ಬಾಗಲಕೋಟ ಇವರಿಗೆ ಮಾಹಿತಿ ಕುರಿತು ಕಳುಹಿಸಿದೆ.
4) ಉಪ ವಿಭಾಗಾಧಿಕಾರಿಗಳು, ಜಮಖಂಡಿ ಉಪ-ವಿಭಾಗ, ಜಮಖಂಡಿ ಇವರಿಗೆ ಮಾಹಿತಿಗಾಗಿ.
5) ಪುನರ್‌ವಸತಿ ಅಧಿಕಾರಿಗಳು, ಕೃ.ಮೇ.ಯೋ. ಬೀಳಗಿ ಇವರಿಗೆ ಸಂಬಂಧಪಟ್ಟ ಕಡತದೊಂದಿಗೆ ಹಿಂದಿರುಗಿಸಲಾಗಿದೆ.
6) ವಿಶೇಷ ಭೂಸ್ವಾಧೀನಾಧಿಕಾರಿಗಳು, ಕೃ.ಮೇ.ಯೋ. ಬೀಳಗಿ ಇವರಿಗೆ ಸೂಕ್ತ ಕ್ರಮಕ್ಕಾಗಿ
7) ತಹಶೀಲ್ದಾರರು ಬೀಳಗಿ ತಾಲೂಕ ಇವರ ಮಾಹಿತಿಗಾಗಿ.
8) ಪೌರಾಯುಕ್ತರು, ನಗರಸಭೆ ಮುಧೋಳ ತಾಲೂಕ: ಮುಧೋಳ ಇವರಿಗೆ.
9) Web site: www.bagalkot.nic.in/ukp. ಅಂತರಜಾಲದಲ್ಲಿ ಅಳವಡಿಸಲು ಸಿಸ್ಟಂ ಮ್ಯಾನೇಜರ, ಕಂಪ್ಯೂಟರ ವಿಭಾಗ ಪು ಮತ್ತು ಪು. ಕೃ.ಮೇ.ಯೋ. ನವನಗರ, ಬಾಗಲಕೋಟ ಇವರಿಗೆ.
10) ಭೂಸ್ವಾಧೀನ ಶಾಖೆಗೆ.